# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42**

---

ಸಂಖ್ಯೆ:ಸ.ಇಂ/ವಾ-91/ವಾರ್ಡ್‌ಸಭೆ/06/2022-23 ದಿನಾಂಕ:06-08-2022

**ವಾರ್ಡ್-91 ರ ವಾರ್ಡ್ ಸಭೆಯ ನಡವಳಿ**

ದಿನಾಂಕ: 06-08-2022 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-91, ಭಾರತಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ಪದ್ಮರಾಜ್. ವಾರ್ಡ್-91 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಪದ್ಮರಾಜ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ ಪೂರ್ವ) ಹಾಗೂ ನೋಡಲ್ ಅಧಿಕಾರಿ ವಾರ್ಡ್-91 |
| 2 | ಶ್ರೀ ಪ್ರವೀಣ್.ಎನ್.ಎಂ, | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:91 |
| 3 | ಶ್ರೀ ಸತೀಶ್, | ಕಂದಾಯ ಪರಿವೀಕ್ಷಕರು |
| 4 | ಶ್ರೀ ಕಾರ್ತಿಕ್ | ಕಿರಿಯ ಆರೋಗ್ಯ ಪರಿವೀಕ್ಷಕರು |

**ಮಾನ್ಯ ನೋಡಲ್ ಅಧಿಕಾರಿರವರು ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.**

- ಮಾನ್ಯ ನೋಡಲ್ ಅಧಿಕಾರಿರವರು ಮಾತನಾಡುತ್ತ ಸ್ಮಾರ್ಟ್ ಸಿಟ್ ಕಾರ್ಯನಿರ್ವಹಿಸರುವ ಕಾಮರಾಜ್ ರಸ್ತೆ ಇಲ್ಲಿ ಚೇಂಬರ್‌ಗಳು ದುರಸ್ಥಿಯಾಗಿದ್ದು, ಅದನ್ನು ಸರಿಪಡಿಸಿ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಸ್ಮಾರ್ಟ್ ಸಿಟಿ ಇಲಾಖೆರವರಿಗೆ ತಿಳಸಲು ಸೂಚಿಸಿರುತ್ತಾರೆ.

**(ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಂಗಳೂರು ಸ್ಮಾರ್ಟ್ ಸಿಟಿ ಲಿ.ಟಿ)**

- ಕಸ ವಿಲೇವಾರಿ ಸಮಯಕ್ಕೆ ಹೋದರು ಕೂಡ ಕೆಲವೊಂದು ಕಡೆ ಸಾರ್ವಜನಿಕರಿಂದ ಒಳ್ಳೆಯ ರೀತಿಯ ಸ್ಪಂದನೆ ಇರುವುದಿಲ್ಲ ಆದ್ದರಿಂದ ಸಾರ್ವಜನಿಕರಿಗೆ ಸ್ವಚ್ಛತ್ತ ಕಾರ್ಯದ ಬಗ್ಗೆ ಅರಿವು ಮೂಡಿಸಲು ಸ್ವಚ್ಛತೆಯನ್ನು ಕಾಪಾಡಲು ಮತ್ತು ಪ್ರಚಾರ ಮಾಡಲು ತಿಳಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ)**

- ಅರಣ್ಯ ಇಲಾಖೆರವರಿಂದ ಮಳೆಯಿಂದಾಗಿ ರಸ್ತೆಯಲ್ಲಿ ಬಿದ್ದಿರುವ ಮರಗಳನ್ನು ತೆರವುಗೊಳಿಸುವಾಗ ಫುಟ್‌ಪಾತ್ ಮೇಲೆ ಕತ್ತರಿಸಿದ ಸೌಧೆಗಳನ್ನು ತೆರವುಗೊಳಸಲು ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ.

**( ಅರಣ್ಯ ಇಲಾಖೆ ಪೂರ್ವ)**

- ಪ್ರತಿವರ್ಷದಂತೆ ಈ ವರ್ಷವು ಸೆಂಟ್ ಮೇರೆಸ್ ಫೆಸ್ಟಿವಲ್ ಶಿವಾಜಿನಗರ ದಿನಾಂಕ: 29-08-2022 ರಿಂದ 08-09-2022 ರವರೆಗೆ ನಡೆಯಲ್ಲಿದ್ದು ಈ ಸಮಯದಲ್ಲಿ ಭಕ್ತಾಧಿಗಳಿಗೆ ತೊಂದರೆ ಉಂಟಾಗದಂತೆ ಕ್ರಮ ಕೈಗೊಳ್ಳಲು ಸೂಚಿಸಿದ್ದು, ಮತ್ತು ಸೆಂಟ್ ಮೇರಿಸ್ ಫೆಸ್ಟಿವಲ್ ಪ್ರಗತಿಯ ಸಮಯದಲ್ಲಿ ಪಿ.ಕೆ ಕಸವಿಲೇವಾರಿ ಹಾಗೂ ಸ್ವಚ್ಛತೆ ಕಾಪಡಲು ಅಗತ್ಯ ಕ್ರಮ ಕೈಗೊಳ್ಳಲು **ಸ.ಕಾ.ನಿ.ಅ ಘನ ತ್ಯಾಜ್ಯ ಇಲಾಖೆ** ರವರಿಗೆ ಮುಂಜಾಗ್ರತೆ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು ಘನ ತ್ಯಾಜ್ಯ (ಪೂ)**

- **ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಗೆ ಸಂಬಂಧಿಸಿದಂತೆ:**- ಸ್ಯಾನಿಟರಿ ಚೇಂಬರ್‌ಗಳಿಂದ ಮೇಲೆತ್ತುವ ಹೂಳನ್ನು ಸೂಕ್ತ ರೀತಿಯಲ್ಲಿ ಸಕಾಲದಲ್ಲಿ ವಿಲೇವಾರಿ ಮಾಡುವಂತೆ ಹಾಗೂ ರಸ್ತೆಗಿಂತ ಎತ್ತರ ಅಥವಾ ತಗ್ಗಿನಲ್ಲಿರುವ ಸ್ಯಾನಿಟರಿ ಚೇಂಬರ್‌ಗಳಿದ್ದರೆ ಶೀಘ್ರವಾಗಿ ರಸ್ತೆ ಮಟ್ಟಕ್ಕೆ ಸರಿಪಡಿಸುವಂತೆ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಸಹಾಯಕ ಇಂಜಿನಿಯರ್ ರವರಿಗೆ ಸೂಚಿಸಿದರು.

**ಬೆಂಗಳೂರು ಬಿ.ಡಬ್ಲ್ಯೂ ಎಸ್.ಎಸ್.ಬಿ**

- ಬಿಬಿಎಂಪಿ ಆರೋಗ್ಯ ಇಲಾಖೆ ಕ್ವಾಡ್ರೆಂಟ್ ಸರ್ಕಲ್, ಭಾರತಿನಗರದಲ್ಲಿರುವ ಆರೋಗ್ಯ ಇಲಾಖೆಯ ಬಿಬಿಎಂಪಿ ಕಟ್ಟಡವನ್ನು ನವೀಕರಿಸಲು ಪರಿಶೀಲಿಸಿ ಕ್ರಮ ಜರುಗಿಸಲು ತಿಳಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಶಿವಾಜಿನಗರ) ಉಪ ವಿಭಾಗ)**

- ಕಸ ವಿಲೇವಾರಿ ಸಮಯಕ್ಕೆ ಹೋದರು ಕೂಡ ಕೆಲವೊಂದು ಕಡೆ ಸಾರ್ವಜನಿಕರಿಂದ ಒಳ್ಳೆಯ ರೀತಿಯ ಸ್ಪಂದನೆ ಇರುವುದಿಲ್ಲ ಆದ್ದರಿಂದ ಸಾರ್ವಜನಿಕರಿಗೆ ಸ್ವಚ್ಛತ್ತ ಕಾರ್ಯದ ಬಗ್ಗೆ ಅರಿವು ಮೂಡಿಸಲು ಸ್ವಚ್ಚತೆಯನ್ನು ಕಾಪಾಡಲು ಮತ್ತು ಪ್ರಚಾರ ಮಾಡಲು ತಿಳಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ)**

- ಮೇಮೋರಿಯಲ್ ಪಾರ್ಕ್ ಅನ್ನು ಸೂಕ್ತ ರೀತಿಯಲ್ಲಿ ನಿರ್ವಹಣಾ ಕಾರ್ಯವನ್ನು ನಿರ್ವಹಿಸಲು ತೋಟಗಾರಿಕಾ ಇಲಾಖೆರವರಿಗೆ ಮತ್ತೋಮ್ಮೆ ತಿಳಸಲು ಸೂಚಿಸಿರುತ್ತಾರೆ.

**(ಅಧೀಕ್ಷಕರು ತೋಟಗಾರಿಕಾ ಇಲಾಖೆ)**

- ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ಮತ್ತು ಪಾದಚಾರಿ ರಸ್ತೆಗಳಲ್ಲಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸ್‌ನ್ನು ರಾತ್ರಿ ಹೊತ್ತಿನಲ್ಲಿ ಸುರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಹಾಗೂ ಪಾದಚಾರಿಗಳಗೆ ಓಡಾಡಲು ತುಂಬಾ ತೊಂದರೆಯುಂಟಾಗುತ್ತಿರುತ್ತದೆ, ಆದುದರಿಂದ ಸದರಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸನ್ನು ತೆರವುಗೊಳಸಲು ಅವಶ್ಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು ಮಾತನಾಡುತ್ತಾ, ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಸಿರುತ್ತಾರೆ.

- ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾದಲ್ಲಿ ಸಾರ್ವಜನಿಕರ ಕುಂದುಕೊರತೆಗಳಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು ಹಾಗು ಹಾಜರಿದ್ದ ಸಾರ್ವಜನಿಕರಿಗೆ ಕಸ ವಿಲೇವಾರಿ ಬಗ್ಗೆ ಆದಷ್ಟು ಗಮನವಹಿಸಿ ಸಹಕರಿಸಿದಲ್ಲಿ ದಿನನಿತ್ಯದ ಕಸ ವಿಲೇವಾರಿ ಸಮಯದಲ್ಲಿ ಸಮರ್ಪಕವಾಗಿ ನಿರ್ವಹಿಸಲು ಗುತ್ತಿಗೆದಾರರು ಸಹಾಯವಾಗುತ್ತದೆ.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸುತ್ತಾ ಮೇಲೆ ತಿಳಸಿರುವ ಎಲ್ಲಾ ಆಕ್ಷೇಪಣೆಗಳನ್ನು ಸಂಬಂಧಪಟ್ಟ ಇಲಾಖೆರವರಿಗೆ ತಿಳಸಿ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

ನೋಡಲ್ ಅಧಿಕಾರಿರವರ ಸೂಚನೆಗಳಂತೆ ನಡವಳಗಳನ್ನು ತಯಾರಿಸಿ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿರುತ್ತಾರೆ.

(ಪ್ರವೀಣ್.ಎನ್.ಎಂ)
ಸ.ಅ.&ಕಾರ್ಯದರ್ಶಿ
ವಾರ್ಡ್-91, ಭಾರತಿನಗರ